ಫ್ರೀಡಂ ನ್ಯೂಸ್

# ಲೋಕಸಭೆಯಲ್ಲಿ ಕಾರ್ಪೊರೇಟ್ ಕಾನೂನು ತಿದ್ದುಪಡಿ ಮಸೂದೆ 2026 ಮಂಡನೆ



ಕೇಂದ್ರ ಹಣಕಾಸು ಹಾಗೂ ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಇಂದು ಲೋಕಸಭೆಯಲ್ಲಿ ಕಾರ್ಪೊರೇಟ್ ಕಾನೂನುಗಳು(ತಿದ್ದುಪಡಿ)ಮಸೂದೆ 2026 ಅನ್ನು ಮಂಡಿಸಲಿದ್ದಾರೆ. ಪಾವತಿಸಿದ ಬಂಡವಾಳ ಮತ್ತು ಮೀಸಲು ಮೇಲಿನ ಶೇ.25 ನಿಯಮವನ್ನು ಸಡಿಲಿಸುವ ಮೂಲಕ ಮಸೂದೆಯು ಕೆಲವು ಕಂಪನಿಗಳಿಗೆ ಪರಿಹಾರವನ್ನು ನೀಡುತ್ತದೆ. ಇದು ಸಣ್ಣ ಮತ್ತು ಮಧ್ಯಮ ಗಾತ್ರದ ಕಂಪನಿಗಳಿಗೆ ಗಮನಾರ್ಹವಾಗಿ ಪ್ರಯೋಜನವನ್ನು ನೀಡುತ್ತದೆ. ಹೊಸ ಕಾರ್ಪೊರೇಟ್ ಕಾನೂನು ತಿದ್ದುಪಡಿ ಮಸೂದೆಯಲ್ಲಿ ಕಂಪನಿಯ ಸಿಎಸ್ಆರ್ ಮಿತಿಯನ್ನು 5 ಕೋಟಿ ರೂ.ಗಳಿಂದ 10 ಕೋಟಿ ರೂ.ಗಳಿಗೆ ಹೆಚ್ಚಿಸುವ ಯೋಜನೆಯನ್ನು ಮಾಡಲಾಗಿದೆ.

ಇನ್ನು ಮುಂದೆ ಪ್ರತಿ ವರ್ಷ ಭೌತಿಕ ವಾರ್ಷಿಕ ಮಹಾಸಭೆಗಳು ಅಗತ್ಯವಿಲ್ಲ.ಕಂಪನಿಗಳು ಮೂರು ವರ್ಷಗಳಿಗೊಮ್ಮೆ ಭೌತಿಕ ವಾರ್ಷಿಕ ಮಹಾಸಭೆಯನ್ನು ನಡೆಸಬಹುದು.ಉಳಿದ ವಾರ್ಷಿಕ ಮಹಾಸಭೆಗಳನ್ನು ವಿಡಿಯೋ ಕಾನ್ಫರೆನ್ಸ್ ಮೂಲಕ ನಡೆಸಬಹುದು.ಇದು ಸಮಯ ಮತ್ತು ವೆಚ್ಚ ಎರಡನ್ನೂ ಉಳಿಸುತ್ತದೆ. ಡಿಜಿಟಲ್ ಪ್ರಕ್ರಿಯೆಗಳನ್ನು ಉತ್ತೇಜಿಸಲಾಗುತ್ತದೆ ಮತ್ತು ನಿಯಂತ್ರಕ ವ್ಯವಸ್ಥೆಯು ಬಲಗೊಳ್ಳುತ್ತದೆ. ಒಟ್ಟಾರೆಯಾಗಿ, ಈ ಮಸೂದೆಯು ಕಾರ್ಪೊರೇಟ್ ವಲಯಕ್ಕೆ ದೊಡ್ಡ ಬದಲಾವಣೆ ತರಬಹುದು.

ಸೀಮಿತ ಹೊಣೆಗಾರಿಕೆ ಪಾಲುದಾರಿಕೆ ಕಾಯ್ದೆ, 2008 ಮತ್ತು ಕಂಪನಿಗಳ ಕಾಯ್ದೆ, 2013 ಅನ್ನು ತಿದ್ದುಪಡಿ ಮಾಡುವ ಗುರಿಯನ್ನು ಈ ಮಸೂದೆ ಹೊಂದಿದೆ. 2026-2027ರ ಹಣಕಾಸು ವರ್ಷಕ್ಕೆ ಕೇಂದ್ರ ಸರ್ಕಾರದ ಹಣಕಾಸು ಪ್ರಸ್ತಾವನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಅವಕಾಶ ನೀಡುವ ಹಣಕಾಸು ಮಸೂದೆ ಇದಾಗಿರಲಿದ್ದು, ಸದನದ ಕಾರ್ಯಸೂಚಿಯಲ್ಲಿ ಪಟ್ಟಿ ಮಾಡಲಾಗಿದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇಂದು ರಾಜ್ಯಸಭೆಯಲ್ಲಿ ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ (ಸಾಮಾನ್ಯ ಆಡಳಿತ) ಮಸೂದೆ, 2026 ಅನ್ನು ಮಂಡಿಸಲಿದ್ದಾರೆ. ಈ ಮಸೂದೆಯು ಗ್ರೂಪ್ 'ಎ' ಜನರಲ್ ಡ್ಯೂಟಿ ಅಧಿಕಾರಿಗಳು ಮತ್ತು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳಲ್ಲಿನ ಇತರ ಅಧಿಕಾರಿಗಳ ನೇಮಕ ಮತ್ತು ಸೇವಾ ಪರಿಸ್ಥಿತಿಗಳಿಗೆ ಸಂಬಂಧಿಸಿದ ನಿಯಮಗಳನ್ನು ನಿಯಂತ್ರಿಸುವ ಗುರಿಯನ್ನು ಹೊಂದಿದೆ.

ಈ ಮಸೂದೆಯು 2026-27ರ ಹಣಕಾಸು ವರ್ಷದ ಸೇವೆಗಳಿಗಾಗಿ ಭಾರತದ ಏಕೀಕೃತ ನಿಧಿಯಿಂದ ಕೆಲವು ಮೊತ್ತಗಳ ಪಾವತಿ ಮತ್ತು ಹಂಚಿಕೆಗೆ ಅಧಿಕಾರ ನೀಡುತ್ತದೆ. ಲೋಕಸಭೆಯು ಈಗಾಗಲೇ ಈ ಮಸೂದೆಯನ್ನು ಅಂಗೀಕರಿಸಿದೆ.

ಸಿಎಲ್‌ಸಿಯ ಇತ್ತೀಚಿನ ವರದಿಯನ್ನು ಮಾರ್ಚ್ 21, 2022 ರಂದು ಸಲ್ಲಿಸಲಾಯಿತು. ಸೆಪ್ಟೆಂಬರ್ 2019 ರಲ್ಲಿ 11 ಸದಸ್ಯರೊಂದಿಗೆ ರಚಿಸಲಾದ ಈ ಸಮಿತಿಯಲ್ಲಿ ಮಾಜಿ ಲೋಕಸಭಾ ಪ್ರಧಾನ ಕಾರ್ಯದರ್ಶಿ ಟಿ ಕೆ ವಿಶ್ವನಾಥನ್, ಕೋಟಕ್ ಮಹೀಂದ್ರಾ ಬ್ಯಾಂಕ್ ಎಂಡಿ ಉದಯ್ ಕೋಟಕ್, ಶಾರ್ದುಲ್ ಅಮರ್‌ಚಂದ್ ಮಂಗಲದಾಸ್ ಹಾಗೂ ಕಂಪನಿಯ ಕಾರ್ಯನಿರ್ವಾಹಕ ಅಧ್ಯಕ್ಷ ಶಾರ್ದುಲ್ ಎಸ್. ಶ್ರಾಫ್, ಸಿಎ ಜಿ. ರಾಮಸ್ವಾಮಿ ಮತ್ತು ಎಕ್ಸ್‌ಪ್ರೊ ಇಂಡಿಯಾ ಅಧ್ಯಕ್ಷ ಸಿದ್ಧಾರ್ಥ್ ಬಿರ್ಲಾ ಇದ್ದರು.



# ಹಾರ್ಮುಜ್ ಜಲಸಂಧಿ ದಾಟಲು ₹18 ಕೋಟಿ ಟೋಲ್..?

ಪಶ್ಚಿಮ ಏಷ್ಯಾದಲ್ಲಿ ನಡೆಯುತ್ತಿರುವ ಉದ್ವಿಗ್ನತೆ ಮಧ್ಯೆ, ಇರಾನ್ ಹಾರ್ಮುಜ್ ಜಲಸಂಧಿಗೆ ಸಂಬಂಧಿಸಿದಂತೆ ಹೊಸ ಕಾರ್ಯತಂತ್ರವನ್ನು ಅಭಿವೃದ್ಧಿಪಡಿಸುತ್ತಿದೆ. ಜಾಗತಿಕ ವ್ಯಾಪಾರ ಮತ್ತು ಕಡಲ ಆರ್ಥಿಕತೆಯ ದಿಕ್ಕನ್ನು ಬದಲಾಯಿಸಬಹುದಾದ ಯೋಜನೆಯಲ್ಲಿ ಇರಾನ್ ಕಾರ್ಯನಿರ್ವಹಿಸುತ್ತಿದೆ. ಹಾರ್ಮುಜ್ ಜಲಸಂಧಿಯ ಮೂಲಕ ಹಾದುಹೋಗುವ ಹಡಗುಗಳ ಮೇಲೆ ಸುಂಕ ಅಥವಾ ಸಾರಿಗೆ ಶುಲ್ಕ ವಿಧಿಸಲು ಇರಾನ್ ಮುಂದಾಗಿದೆ. ಸುಮಾರು 18 ಕೋಟಿ ರೂ. ಶುಲ್ಕ ಕಟ್ಟಬೇಕಾಗಬಹುದು ಎಂದು ಅಂದಾಜಿಸಲಾಗಿದೆ. ಹಾರ್ಮುಜ್ ನೆಪ ಇಟ್ಟುಕೊಂಡು ಇರಾನ್ ಇಡೀ ಜಗತ್ತನ್ನು ಬ್ಲ್ಯಾಕ್‌ಮೇಲ್ ಮಾಡಲು ಮುಂದಾದಂತೆ ಕಾಣುತ್ತಿದೆ.

ಈ ಪ್ರಸ್ತಾಪವು ಜಾರಿಗೆ ಬಂದರೆ, ಜಾಗತಿಕ ತೈಲ, ಅನಿಲ ಮತ್ತು ವ್ಯಾಪಾರ ಪೂರೈಕೆ ಸರಪಳಿಗಳ ಮೇಲೆ ಪರಿಣಾಮ ಬೀರಬಹುದು.ವಾಸ್ತವವಾಗಿ, ಹಾರ್ಮುಜ್ ಜಲಸಂಧಿಯು ವಿಶ್ವದ ಪ್ರಮುಖ ಸಮುದ್ರ ಮಾರ್ಗಗಳಲ್ಲಿ ಒಂದಾಗಿದೆ. ಜಾಗತಿಕ ತೈಲ ಮತ್ತು ದ್ರವೀಕೃತ ನೈಸರ್ಗಿಕ ಅನಿಲದ ಸರಿಸುಮಾರು ಶೇ.20 ಇದರ ಮೂಲಕ ಹಾದುಹೋಗುತ್ತದೆ. ಆದ್ದರಿಂದ ಈ ಪ್ರದೇಶದಲ್ಲಿನ ಯಾವುದೇ ಬದಲಾವಣೆಗಳು ಅಂತಾರಾಷ್ಟ್ರೀಯ ಮಾರುಕಟ್ಟೆಗಳ ಮೇಲೆ ನೇರವಾಗಿ ಪರಿಣಾಮ ಬೀರುತ್ತದೆ.

ಪಶ್ಚಿಮ ಏಷ್ಯಾದಲ್ಲಿ ಇತ್ತೀಚೆಗೆ ಉಂಟಾದ ಉದ್ವಿಗ್ನತೆ, ವಿಶೇಷವಾಗಿ ಇಸ್ರೇಲ್ ಮತ್ತು ಇರಾನ್ ನಡುವಿನ ಹೆಚ್ಚುತ್ತಿರುವ ಸಂಘರ್ಷದ ನಂತರ ಪರಿಸ್ಥಿತಿ ಹೆಚ್ಚು ಸೂಕ್ಷ್ಮವಾಗಿದೆ. ಕತಾರ್ ಹಾಗೂ ಇರಾನ್ ನಡುವೆ ಇರುವ ಸೌತ್ ಪಾರ್ಸ್ ಅನಿಲ ಘಟಕವು ಮಹತ್ವದ್ದಾಗಿದೆ. ಇದನ್ನು ವಿಶ್ವದ ಅತಿದೊಡ್ಡ ನೈಸಗರ್ಗಕ ಅನಿಲ ನಿಕ್ಷೇಪವೆಂದು ಪರಿಗಣಿಸಲಾಗಿದೆ.

ಈ ತಂತ್ರವು ಸಾಂಪ್ರದಾಯಿಕ ಯುದ್ಧದಿಂದ ಆರ್ಥಿಕ ಯುದ್ಧಕ್ಕೆ ಬದಲಾಗಬಹುದು ಎಂದು ತಜ್ಞರು ಹೇಳುತ್ತಾರೆ. ನಿರ್ಣಾಯಕ ಜಲಮಾರ್ಗವನ್ನು ನಿಯಂತ್ರಿಸುವ ಹೊಸ ವಿಧಾನವನ್ನು ಗುರುತಿಸುವ ಮೂಲಕ ಭಾರಿ ಪ್ರಮಾಣದ ಸುಂಕವನ್ನು ಈಗಾಗಲೇ ಜಾರಿಗೆ ತರಲಾಗಿದೆ ಎಂದು ಸಂಸತ್ತಿನ ರಾಷ್ಟ್ರೀಯ ಭದ್ರತಾ ಸಮಿತಿಯ ಸದಸ್ಯರಾಗಿರುವ ಇರಾನಿನ ಶಾಸಕ ಅಲಾಯೆದ್ದೀನ್ ಬೊರೊಜೆರ್ಡಿ ತಿಳಿಸಿದ್ದಾರೆ.

48 ಗಂಟೆಗಳ ಒಳಗೆ ಜಲಸಂಧಿಯನ್ನು ಮತ್ತೆ ತೆರೆಯದಿದ್ದರೆ, ಅಮೆರಿಕವು ಇರಾನ್‌ನ ವಿದ್ಯುತ್ ಮೂಲಸೌಕರ್ಯವನ್ನು ಗುರಿಯಾಗಿಸಬಹುದು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಕೆ ನೀಡಿದ್ದ ಬೆನ್ನಲ್ಲೇ ಬೊರೊಜೆರ್ಡಿ ಅವರ ಹೇಳಿಕೆಗಳು ಬಂದಿವೆ. ಇರಾನ್ ವಿರೋಧಿಗಳನ್ನು ಹೊರತುಪಡಿಸಿ ಉಳಿದ ದೇಶಗಳಿಗೆ ಹಾರ್ಮುಜ್ ಜಲಸಂಧಿ ಮುಕ್ತವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.




# ಕಚ್ಚಾ ವಸ್ತು ಕೊರತೆ ಆಟೋಮೊಬೈಲ್ ಇಂಡಸ್ಟ್ರಿ ಬಂದ್

ಸಾವಿರಾರು ಕಿಲೋಮೀಟರ್ ದೂರದಲ್ಲಿ ನಡೆಯುತ್ತಿರುವ ಇರಾನ್-ಇಸ್ರೇಲ್ ಯುದ್ಧದ ಪರಿಣಾಮ ಇದೀಗ ಕರ್ನಾಟಕ ರಾಜಧಾನಿ ಬೆಂಗಳೂರಿಗೂ ತಟ್ಟಿದೆ. ಮಧ್ಯಪ್ರಾಚ್ಯ ಬಿಕ್ಕಟ್ಟಿನಿಂದ ಕಚ್ಚಾ ತೈಲ ಬೆಲೆ ಏರಿಕೆಯಷ್ಟೇ ಅಲ್ಲ, ನಗರದ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಮೇಲೂ ನೇರ ಪರಿಣಾಮ ಬೀಳುತ್ತಿದೆ. ಇದು ದೇಶದ ರಕ್ಷಣಾ ಕ್ಷೇತ್ರ ಮತ್ತು ರೈಲ್ವೆ ಇಲಾಖೆ ಮೇಲೂ ಪರಿಣಾಮ ಬೀರುತ್ತಿದೆ. ರಕ್ಷಣಾ ಇಲಾಖೆಯ ವಾಹನಗಳ ತಯಾರಿಕೆಗೆ ಹಾಗೂ ರೈಲ್ವೆ ಇಲಾಖೆಗೆ ಟೂಲ್ಸ್ ಪ್ರೊಫೈಲ್ ಕಚ್ಚಾವಸ್ತು ಸರಬರಾಜು ಮಾಡುತ್ತಿದ್ದ ಪೀಣ್ಯಾದಲ್ಲಿರುವ ಶ್ರೀ ಲಕ್ಷ್ಮಿ ಪ್ರೊಫೈಲ್ ಆಟೋಮೊಬೈಲ್ ಇಂಡಸ್ಟ್ರಿಯನ್ನು ತಾತ್ಕಲಿಕವಾಗಿ ಬಂದ್ ಮಾಡಲಾಗಿದೆ.

ಬೆಂಗಳೂರು ನಗರದಲ್ಲಿರುವ ಪೀಣ್ಯ ಕೈಗಾರಿಕಾ ವಲಯದ ಸಣ್ಣ ಕೈಗಾರಿಕೆಗಳು ಈಗ ಗಂಭೀರ ಸಂಕಷ್ಟ ಎದುರಿಸುತ್ತಿವೆ. ವಿಶೇಷವಾಗಿ ಟೂಲ್ಸ್, ಪ್ರೊಫೈಲ್ ಮತ್ತು ಆಟೋಮೊಬೈಲ್ ಬಿಡಿಭಾಗ ತಯಾರಿಕಾ ಕಂಪನಿಗಳು ಕಚ್ಚಾ ವಸ್ತು ಹಾಗೂ ಇಂಧನ ಕೊರತೆಯಿಂದ ಸಂಕಷ್ಟಕ್ಕೆ ಸಿಲುಕಿವೆ.

ಪೀಣ್ಯಾದಲ್ಲಿರುವ ಶ್ರೀ ಲಕ್ಷ್ಮಿ ಪ್ರೊಫೈಲ್ ಆಟೋಮೊಬೈಲ್ ಇಂಡಸ್ಟ್ರಿ ತಾತ್ಕಾಲಿಕವಾಗಿ ಕಾರ್ಯಾಚರಣೆ ನಿಲ್ಲಿಸಿದೆ. ಈ ಸಂಸ್ಥೆ ಭಾರತೀಯ ರಕ್ಷಣಾ ವಲಯ ಮತ್ತು ರೈಲ್ವೆಗೆ ಅಗತ್ಯವಾದ ಬಿಡಿಭಾಗಗಳನ್ನು ಪೂರೈಸುತ್ತಿತ್ತು. ಜೊತೆಗೆ ವಿಪ್ರೋ ಸೇರಿದಂತೆ ಹಲವು ಕಂಪನಿಗಳಿಗೂ ಪೂರೈಕೆಗಳನ್ನು ಮಾಡುತ್ತಿತ್ತು.

# ಕಾಂಗ್ರೆಸ್ ಮುಖಂಡ ಕರಿಯಣ್ಣ ಸಂಗಟಿ ಇನ್ನಿಲ್ಲ





**ಮಾಜಿ ವಿಧಾನ ಪರಿಷತ್ ಸದಸ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರ ಆಪ್ತರಾಗಿದ್ದ ಕರಿಯಣ್ಣ ಸಂಗಟಿ (60) ಅನಾರೋಗ್ಯದಿಂದ ನಿಧನರಾಗಿದ್ದಾರೆ. ಬಹು ಅಂಗಾಂಗ ವೈಫಲ್ಯದಿಂದ ಬಳಲುತ್ತಿದ್ದ ಅವರನ್ನು ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಅವರು ಆಸ್ಪತ್ರೆಯಲ್ಲೇ ಕೊನೆಯುಸಿರೆಳೆದಿದ್ದಾರೆ.**

**ಬಹು ಅಂಗಾಗ ವೈಫಲ್ಯದಿಂದ ಬಳಲುತ್ತಿದ್ದ ಸಂಗಟಿ**

**ಕರಿಯಣ್ಣ ಸಂಗಟಿ ಅವರು ರಾಜಕೀಯವಾಗಿ ಸಕ್ರಿಯರಾಗಿದ್ದು, ಎರಡು ಬಾರಿ ಕೊಪ್ಪಳ ಜಿಲ್ಲಾ ಪಂಚಾಯತ್ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ಸರಳ ವ್ಯಕ್ತಿತ್ವ ಮತ್ತು ಸಂಘಟನಾ ಸಾಮರ್ಥ್ಯದಿಂದ ಅವರು ಜನಮನ್ನಣೆ ಗಳಿಸಿದ್ದರು. ಡಿಕೆ ಶಿವಕುಮಾರ್ ಅವರಿಗೆ ಆಪ್ತರಾಗಿದ್ದ ಅವರು ಪಕ್ಷದ ವಿವಿಧ ಚಟುವಟಿಕೆಗಳಲ್ಲಿ ಪ್ರಮುಖ ಪಾತ್ರವಹಿಸಿದ್ದರು.**

**ಮೂಲತಃ ಕೊಪ್ಪಳ ತಾಲೂಕಿನ ಯಲಮಗೇರಿ ಗ್ರಾಮದ ನಿವಾಸಿಯಾಗಿದ್ದ ಕರಿಯಣ್ಣ ಸಂಗಟಿ ಅವರ ನಿಧನಕ್ಕೆ ರಾಜಕೀಯ ವಲಯದಲ್ಲಿ ಶೋಕ ವ್ಯಕ್ತವಾಗಿದೆ. ಅವರ ಅಗಲಿಕೆಯಿಂದ ಜಿಲ್ಲೆಯಲ್ಲಿ ಅಪಾರ ನಷ್ಟ ಉಂಟಾಗಿದೆ ಎಂದು ಹಲವರು ಸಂತಾಪ ಸೂಚಿಸಿದ್ದಾರೆ.**

ಫ್ರೀಡಂ ನ್ಯೂಸ್

23-ಮಾರ್ಚ್ -2026 www.freedomtvlive.com

# ಶಾಮನೂರು ಮೊಮ್ಮಗನಿಗೆ ಟಿಕೆಟ್ ಮುಸ್ಲಿಂ ಮುಖಂಡರ ಅಸಮಾಧಾನ



ದಾವಣಗೆರೆ ಉಪಚುನಾವಣಾ ಕಣ ರಂಗೇರಿದ್ದು, ಮಾಜಿ ಸಚಿವ ಶಾಮನೂರು ಶಿವಶಂಕರಪ್ಪ ಮೊಮ್ಮಗ ಸಮರ್ಥ್ ಶಾಮನೂರುಗೆ ಕಾಂಗ್ರೆಸ್ ಟಿಕೆಟ್ ನೀಡಿರುವುದು ಅಲ್ಪಸಂಖ್ಯಾತ ಮುಸ್ಲಿಂ ಮುಖಂಡರ ತೀವ್ರ ಅಸಮಾಧಾನಕ್ಕೆ ಕಾರಣವಾಗಿದೆ. ಇದು ಕಾಂಗ್ರೆಸ್‌ನಲ್ಲಿ ಭಾರಿ ಗೊಂದಲಕ್ಕೆ ಕಾರಣವಾಗಿದ್ದರೆ, ಬಿಜೆಪಿ ಅಭ್ಯರ್ಥಿ ಶ್ರೀನಿವಾಸ್ ದಾಸ್ ಕರಿಯಪ್ಪ ಅವರಿಗೆ ಹೆಚ್ಚಿನ ಬೆಂಬಲ ದೊರೆಯುವುದಕ್ಕೂ ಕಾರಣವಾಗುತ್ತಿದೆ. ಅಲ್ಪಸಂಖ್ಯಾತರಿಗೆ ಟಿಕೆಟ್ ಸಿಗದೇ ಇರುವುದರಿಂದ ಅಸಮಾಧಾನಗೊಂಡಿರುವ 12ನೇ ವಾರ್ಡ್‌ನ ಯುವಕರು, 'ಕೈ' ಮುಖಂಡ ಶಫೀಕ್ ಪಂಡಿತ್ ಅವರ ಶಿಷ್ಯರು, ಬಿಜೆಪಿ ಅಭ್ಯರ್ಥಿ ಶ್ರೀನಿವಾಸ್ ದಾಸ್ ಕರಿಯಪ್ಪ ಅವರಿಗೆ ಬಹಿರಂಗವಾಗಿ ಬೆಂಬಲ ಘೋಷಿಸಿದ್ದಾರೆ. 20ಕ್ಕೂ ಹೆಚ್ಚು ಮುಸ್ಲಿಮರು ಬಿಜೆಪಿಗೆ ಸೇರ್ಪಡೆಗೊಂಡಿದ್ದಾರೆ.

# ಆನ್‌ಲೈನ್ ಅರ್ಜಿ ಬೇಡ

## ನೇರ ಸಂದರ್ಶನದ ಮೂಲಕ ಸರ್ಕಾರಿ ಉದ್ಯೋಗ ಅವಕಾಶ..!

ಕರ್ನಾಟಕ ಸರ್ಕಾರದ ಆಯುಷ್ ಇಲಾಖೆಯು ಅಧಿಕೃತ ಅಧಿಸೂಚನೆಯನ್ನು ಹೊರಡಿಸಿದ್ದು, ಖಾಲಿ ಇರುವ ಖಾತೆ ಸಹಾಯಕ ಹುದ್ದೆಯನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ. ಬೆಂಗಳೂರಿನಲ್ಲಿ ಸರ್ಕಾರಿ ಉದ್ಯೋಗದ ನಿರೀಕ್ಷೆಯಲ್ಲಿರುವ ವಾಣಿಜ್ಯ ಪದವೀಧರರಿಗೆ ಇದೊಂದು ಉತ್ತಮ ಅವಕಾಶವಾಗಿದ್ದು, ಅಭ್ಯರ್ಥಿಗಳು ಯಾವುದೇ ಆನ್‌ಲೈನ್ ಅರ್ಜಿ ಸಲ್ಲಿಸುವ ಅಗತ್ಯವಿಲ್ಲದೆ ಮಾರ್ಚ್ 25 ರಂದು ನೇರವಾಗಿ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ.

ಪ್ರಸ್ತುತ ಆಯುಷ್ ನಿರ್ದೇಶನಾಲಯದಲ್ಲಿ ಒಂದು ಖಾತೆ ಸಹಾಯಕ ಹುದ್ದೆ ಲಭ್ಯವಿದ್ದು, ಆಯ್ಕೆಯಾದ ಅಭ್ಯರ್ಥಿಗೆ ಪ್ರತಿ ತಿಂಗಳು 25,000 ರೂ. ಗೌರವ ಧನವನ್ನು ನೀಡಲಾಗುತ್ತದೆ. ಉದ್ಯೋಗ ಸ್ಥಳವು ಬೆಂಗಳೂರು ಆಗಿರುತ್ತದೆ. ಸರ್ಕಾರದ ನಿಯಮಾನುಸಾರ ಆಯ್ಕೆ ಪ್ರಕ್ರಿಯೆಯು ನಡೆಯಲಿದ್ದು, ಅರ್ಹ ಅಭ್ಯರ್ಥಿಗಳು ತಮ್ಮ ವೃತ್ತಿಜೀವನವನ್ನು ರಾಜ್ಯದ ಆರೋಗ್ಯ ಮತ್ತು ಆಯುಷ್ ವಲಯದಲ್ಲಿ ಆರಂಭಿಸಲು ಇದು ಸೂಕ್ತ ವೇದಿಕೆಯಾಗಿದೆ.

ಅಧಿಸೂಚನೆಯ ಪ್ರಕಾರ, ಈ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಮಾನ್ಯತೆ ಪಡೆದ ವಿಶ್ವವಿದ್ಯಾಲಯ ಅಥವಾ ಮಂಡಳಿಯಿಂದ ಬಿ.ಕಾಂ, ಬಿಬಿಎ/ಬಿಬಿಎಂ ಪದವಿಯನ್ನು ಪೂರ್ಣಗೊಳಿಸಿರಬೇಕು. ವಯೋಮಿತಿಗೆ ಸಂಬಂಧಿಸಿದಂತೆ, ಅಭ್ಯರ್ಥಿಯ ಗರಿಷ್ಠ ವಯಸ್ಸು 45 ವರ್ಷ ಮೀರಿರಬಾರದು. ಸರ್ಕಾರದ ನಿಯಮಗಳ ಅನ್ವಯ ಅರ್ಹ ಅಭ್ಯರ್ಥಿಗಳಿಗೆ ವಯೋಮಿತಿಯಲ್ಲಿ ಸಡಿಲಿಕೆ ಇರಲಿದೆ.




ಈ ಹುದ್ದೆಯ ಆಯ್ಕೆಯು ಕೇವಲ ನೇರ ಸಂದರ್ಶನದ ಮೂಲಕ ನಡೆಯಲಿದೆ. ಆಸಕ್ತ ಮತ್ತು ಅರ್ಹ ಅಭ್ಯರ್ಥಿಗಳು ತಮ್ಮ ಶೈಕ್ಷಣಿಕ ದಾಖಲೆಗಳು, ಅನುಭವದ ಪತ್ರಗಳು (ಇದ್ದಲ್ಲಿ) ಮತ್ತು ಇತ್ತೀಚಿನ ಭಾವಚಿತ್ರದೊಂದಿಗೆ ಮಾರ್ಚ್ 25 ರಂದು ಈ ಕೆಳಗಿನ ವಿಳಾಸಕ್ಕೆ ಹಾಜರಾಗಬೇಕು

**ವಿಳಾಸ:** ಆಡಿಟೋರಿಯಂ, 1ನೇ ಮಹಡಿ, ಆಯುಷ್ ನಿರ್ದೇಶನಾಲಯ, ಧನ್ವಂತರಿ ರಸ್ತೆ, ಬೆಂಗಳೂರು – 560009.